# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ: 04-01-2022 ರಂದು ಸಮಯ 12.00 ಗಂಟೆಗೆ ವಾರ್ಡ್ ಸಂಖ್ಯೆ: 155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ)ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀಮತಿ ಉಮಾದೇವಿ ಬಳಿಗಾರ್, ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಸಹಾಯಕ ಅಭಿಯಂತರರು ವಾ.ನಂ.-155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) (ಹಿ.ಆ.ಪ.) – ಸದಸ್ಯರು
4. ಶ್ರೀ.ರಾಮಚಂದ್ರ (ಕಿ.ಅ-155) ಬೆಸ್ಕಾಂ
5. ಶ್ರೀಮತಿ.ಜ್ಯೋತಿ (ಟಿ.ಇ.)- ಸದಸ್ಯರು
6. ಕೃಷ್ಣಮೂರ್ತಿ-ಜಲ ಪರಿವೀಕ್ಷಕರು ಬಿಡಬ್ಲ್ಯೂಎಸ್ಎಸ್‌ಬಿ
7. ಶ್ರೀ ಪಿಳ್ಳಪ್ಪ – ಸಾರ್ವಜನಿಕರು.
8. ಶ್ರೀ ಕುಮಾರ್- ಸಾರ್ವಜನಿಕರು.
9. ಶ್ರೀ ರಾಜು- ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ನೆರೆದಿದ್ದ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರಿಗೆ ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಖಾಸಗಿ ಖಾಲಿ ನಿವೇಶನಗಳಲ್ಲಿ ಮರ ಗಿಡಗಳು ತುಂಬ ಬೆಳೆದಿದ್ದು ಅಂತಹ ಖಾಲಿ ನಿವೇಶನಗನ್ನು ಗುರುತಿಸಿ ಬೆಳೆದಿರುವ ಗಿಡಗಂಟಿಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

ಕ್ರಮ:- ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-155
ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ರಾಮಾಂಜನೇಯ ಮುಖ್ಯರಸ್ತೆಯಲ್ಲಿ ತಳ್ಳುವ ಹಳೆಯ ಗಾಡಿಯನ್ನು ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಇಟ್ಟಿರುವುದನ್ನು ತೆರವುಗೊಳಿಸಲು ಸಭೆಯಲ್ಲಿ ಉಪಸ್ಥಿತರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಸಹಾಯಕ ಅಭಿಯಂತರರು/ಹಿರಿಯ ಆರೋಗ್ಯ ಪರಿವೀಕ್ಷಕರು,
ವಾರ್ಡ್-155 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

>>>>2

Scanned by Scanner Go

ಹನುಮಂತನಗರದ 9ನೇ ಮುಖ್ಯರಸ್ತೆಯಲ್ಲಿ ಮರದ ಕೊಂಬೆಯನ್ನು ತೆರವು ಮಾಡಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಉಪ ಅರಣ್ಯ ಸಂರಕ್ಷಣಾಧಿಕಾರಿ(ದ) ರವರಿಗೆ,
ಕ್ರಮ ವಹಿಸಲು ಕೋರಲಾಗಿರುತ್ತದೆ.

ಲಕ್ಷ್ಮೀಪುರ ಮುಖ್ಯರಸ್ತೆಯಲ್ಲಿ ಯೋಗ ಕೇಂದ್ರ ಹತ್ತಿರ ರಸ್ತೆ ಬದಿ ಚರಂಡಿಯ ಚಪ್ಪಡಿ ಕಲ್ಲು ಮುರಿದಿದ್ದು ಇದನ್ನು ಸರಿಪಡಿಸಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಕ್ರಮ: – ಸಹಾಯಕ ಅಭಿಯಂತರರು
ವಾರ್ಡ್–155 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(signature) 4/01/2022
ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ–155 ಹನುಮಂತನಗರ

(signature)
ಅಧ್ಯಕ್ಷರು ವಾರ್ಡ್ ಸಮಿತಿ
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ–155 ಹನುಮಂತನಗರ

<u>ಪ್ರತಿಯನ್ನು:-</u>

1. ಮಾನ್ಯ ಮುಖ್ಯ ಆಯುಕ್ತರು, ಬೃಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ಮತ್ತು ವಲಯ ಆಯುಕ್ತರು(ದ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
6. ಮಾನ್ಯ ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
7. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
8. ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಹನುಮಂತನಗರ ರವರ ಅವಗಾಹನೆಗೆ.
10. ಪೋಲೀಸ್ ಇನ್ಸ್‌ಪೆಕ್ಟರ್, ಕಾನೂನು ಸುವ್ಯವಸ್ಥೆ ಹನುಮಂತನಗರ/ಕೆಂಪೇಗೌಡನಗರ ಪೋಲೀಸ್ ಠಾಣೆ ರವರ ಅವಗಾಹನೆಗೆ.
11. ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
13. ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
14. ಕಛೇರಿ ಕಡತಕ್ಕೆ.

Scanned by Scanner Go